**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು**

**ವಿರಾಜಪೇಟೆ.**

**ಸಿ.ಸಿ. ಸಂಖ್ಯೆ: 49/2022**

**ಚಾಸಾ-1**

**ಪ್ರಾಸಾ-4**

| | | |
|---|---|---|
| **ಹೆಸರು** | : | ಎ ಎಂ ತಮ್ಮಯ್ಯ |
| **ತಂದೆ ಹೆಸರು** | : | ಎ ಎಂ ಮಂದಣ್ಣ |
| **ವಯಸ್ಸು** | : | 66 ವರ್ಷ |
| **ಉದ್ಯೋಗ** | : | ಕೃಷಿಕ |
| **ವಾಸಸ್ಥಳ** | : | ಬೆಂಗಳೂರು |

**ದಿನಾಂಕ : 06-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ಮಾನ್ಯ ಸ. ಸ. ಅ. ರವರಿಂದ**

1. ಚಾಸಾ-3 ರಿಂದ 8 ರವರ ಪರಿಚಯವಿರುತ್ತದೆ. ಆರೋಪಿಯ ಪರಿಚಯವಿರುತ್ತದೆ. ಮೃತ ರಾಣಿ ನನ್ನ ತಾಯಿ. ನಾನು ಪೊಲೀಸರಿಗೆ ಯಾವುದೇ ದೂರನ್ನು ನೀಡಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಏನು ಗೊತ್ತಿರುವುದಿಲ್ಲ. ನನ್ನ ತಾಯಿ ಹೇಗೆ ಹಾಗೂ ಯಾರ ತಪ್ಪಿನಿಂದ ಮೃತಪಟ್ಟಿರುತ್ತಾರೆಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದು ದೂರು ಆಗಿದ್ದು, ಸಾಕ್ಷಿಯು ಅದರಲ್ಲಿರುವ ಸಹಿಯನ್ನು ನೋಡಿ ಗುರುಸಿದ ಮೇರೆಗೆ ಸದರಿ ದೂರನ್ನು ನಿಪಿ 6 ಎಂದು, ಸಾಕ್ಷಿಯ ಸಹಿಯನ್ನು ನಿಪಿ6(ಎ) ಎಂದು ಗುರುತಿಸಲಾಯಿತು.

*(ಈ ಹಂತದಲ್ಲಿ ಸ. ಸ. ಅ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಕೋರಿಕೊಂಡಿದ್ದು, ಕೋರಿಕೆಯನ್ನು ಮನ್ನಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)*

**ಪಾಟೀ ಸವಾಲು : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ**

1. ನಾನು ನನ್ನ ಸಂಸಾರದೊಂದಿಗೆ ಬೆಂಗಳೂರಿನಲ್ಲಿ ವಾಸವಾಗಿದ್ದು, ನನ್ನ ಮೃತ ತಾಯಿಯವರು ಮಾತ್ರ ವಿರಾಜಪೇಟೆಯ ಅಮ್ಮತ್ತಿಯಲ್ಲಿ ವಾಸವಾಗಿದ್ದರು. ದಿನಾಂಕ 10-12-2021 ರಂದು ನನ್ನ ಮೃತ ತಾಯಿಯವರು ಅಪಘಾತವಾಗಿರುವ ವಿಚಾರ ತಿಳಿದು, ವಿರಾಜಪೇಟೆ ಸರ್ಕಾರಿ ಆಸ್ಪತ್ರೆಗೆ ಬಂದು ನೋಡಿದಾಗ ನನ್ನ ತಾಯಿಯವರು ಮೃತಪಟ್ಟಿದ್ದರು ಎಂದರೆ ಸರಿ. ಈ ಬಗ್ಗೆ ಚಾಸಾ-3 ರವರು ನನಗೆ ವಿಚಾರವನ್ನು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಅಪಘಾತದ ಬಗ್ಗೆ ಚಾಸಾ-3 ರವರನ್ನು ಕೇಳಿ ವಿಚಾರಿಸಿದಾಗ ದಿನಾಂಕ 10-12-2021 ರಂದು ಸಂಜೆ ಸುಮಾರು 5.30 ಗಂಟೆಗೆ ನನ್ನ ತಾಯಿ ಮನೆಯ ಹತ್ತಿರವಿರುವ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಕೆಎ 12 ಎ 6462 ರ ದೋಸ್ತ್ ವಾಹನವನ್ನು ಆರೋಪಿಯು ಅಜಾರೂಕತೆ ಹಾಗೂ ನಿರ್ಲಕ್ಷ್ಯತನದಿಂದ ಹಿಂದಕ್ಕೆ ಚಲಾಯಿಸಿ, ನನ್ನ ತಾಯಿಗೆ ಡಿಕ್ಕಿಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಅದರ ಪರಿಣಾಮವಾಗಿ ಕಾಲು ಹಾಗೂ ಕೈಗೆ ಅಲ್ಲದೆ ದೇಹದ ಇತರ ಭಾಗಗಳಿಗೆ ಗಾಯವಾಗಿರುತ್ತದೆ ಎಂದರೆ ಸರಿಯಲ್ಲ. ಚಾಸಾ-2 ಹಾಗೂ ಆರೋಪಿಯು ನನ್ನ ತಾಯಿಯನ್ನು ಉಪಚರಿಸಿ ಆಸ್ಪತ್ರೆಗೆ ಕರೆದುಕೊಂಡು ಬಂದಿರುತ್ತಾರೆ ಎಂದು ಚಾಸಾ-3 ರವರು ನನಗೆ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ದಿನಾಂಕ 11-12-

2023 ರಂದು ನಿಪಿ6 ರಂತೆ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಯೊಂದಿಗೆ ರಾಜೀ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ರಾಜೀ ಮಾಡಿಕೊಂಡಿರುವುದರಿಂದ ಆರೋಪಿಗೆ ಸಹಾಯವಾಗಲೆಂದು ಸುಳ್ಳು ಸಾಕ್ಷ್ಯಯನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮುಖ್ಯ ವಿಚಾರಣೆ ಮುಕ್ತಾಯ.

**ಪಾಟಿ ಸವಾಲು ಃ ಆರೋಪಿ ಪರ ಶ್ರೀಮತಿ. ಬಿ ಎ ಕೆ ವಕೀಲರಿಂದ**

ಪಾಟಿ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಸಹಿ/-
(ಪ್ರದೀಪ ಪೋತದಾರ)
ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.
ವಿರಾಜಪೇಟೆ.